ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 07-04-2017

# ಪತ್ರಿಕಾ ಆಮಂತ್ರಣ

1. **ವಿಶ್ವ ಆರೋಗ್ಯ ದಿನಾಚರಣೆ**
**ಖಿನ್ನತೆಯಿಂದ ಉತ್ಸಾಹದೆಡೆಗೆ**

**ಉದ್ಘಾಟನೆ:**

**ಕೆ.ಆರ್. ರಮೇಶ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ**

**ಉಪಸ್ಥಿತರು:**

**ಕುಮಾರಿ. ದೀಪಿಕಾ ಪಡುಕೋಣೆ, ಖ್ಯಾತ ಸಿನಿಮಾ ತಾರೆ.**

**ದಿನಾಂಕ: 08-04-2017 ಶನಿವಾರ, ಸಮಯ: ಬೆಳಿಗ್ಗೆ 11.30 ಗಂಟೆಗೆ.**

**ಸ್ಥಳ: ಕನ್ವೆನ್ಷನ್ ಹಾಲ್, ನಿಮ್ಹಾನ್ಸ್, ಹೊಸೂರು ರಸ್ತೆ, ಬೆಂಗಳೂರು.**

2. **ಭಗವಾನ್ ಶ್ರೀ ಮಹಾವೀರ ಜಯಂತಿ ಹಾಗೂ "ಶ್ರೀ ಭಗವಾನ್ ಮಹಾವೀರ ಶಾಂತಿ" ಪ್ರಶಸ್ತಿ ಪ್ರದಾನ ಸಮಾರಂಭ;**

**ಉದ್ಘಾಟನೆ:**

**ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವೆ**

**ಮುಖ್ಯ ಅತಿಥಿಗಳು:**

**ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರು.**

**ಕೆ.ಜೆ. ಜಾರ್ಜ್, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.**

**ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.**

**ದಿನಾಂಕ: 09-04-2017, ಭಾನುವಾರ. ಸಮಯ: ಸಂಜೆ 5.30 ಗಂಟೆಗೆ.**

ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು

## ಪತ್ರಿಕಾ ಪ್ರಕಟಣೆ

## ಶಾಲಾ ಮಕ್ಕಳಿಗೆ ಸಾಹಸ ತರಬೇತಿ ಶಿಬಿರ

**ಬೆಂಗಳೂರು, ಏಪ್ರಿಲ್ 7 , (ಕರ್ನಾಟಕ ವಾರ್ತೆ)**

ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ವತಿಯಿಂದ ಏಪ್ರಿಲ್ ಹಾಗೂ ಮೇ ತಿಂಗಳಿನಲ್ಲಿ 'ಶಾಲಾ ಮಕ್ಕಳಿಗೆ ಬೇಸಿಗೆ ಸಾಹಸ ತರಬೇತಿ ಶಿಬಿರ' ಗಳನ್ನು ಆಯೋಜಿಸಿದೆ. ತರಬೇತಿಯಲ್ಲಿ 10 ರಿಂದ 16 ವಯೋಮಿತಿಯ ಮಕ್ಕಳು ಭಾಗವಹಿಸಬಹುದಾಗಿದೆ.

ಏಪ್ರಿಲ್ 18 ರಿಂದ 22 ರವರೆಗೆ ಚಿತ್ರದುರ್ಗದ ವಾಣಿ ವಿಲಾಸ ಸಾಗರದಲ್ಲಿ ಜಲ ಸಾಹಸ ಕ್ರೀಡೆ, ಮೇ 10 ರಿಂದ 14 ರವರೆಗೆ ಕೊಡಗು ಬರಪೊಳೆಯಲ್ಲಿ ಸಾಹಸ ಮತ್ತು ಪ್ರಕೃತಿ ಅಧ್ಯಯನ ಶಿಬಿರ ಹಾಗೂ ಮೇ 15 ರಿಂದ 19 ರವರೆಗೆ ಬಾಗಲಕೋಟೆ ಜಿಲ್ಲೆಯ ಬಾದಾಮಿಯಲ್ಲಿ ಶಿಲಾರೋಹಣ ತರಬೇತಿಯನ್ನು ಹಮ್ಮಿಕೊಂಡಿದೆ.

ತರಬೇತಿಯಲ್ಲಿ ಪಾಲ್ಗೊಳ್ಳುವ ಆಸಕ್ತರು ಅರ್ಜಿಗಳನ್ನು ಅಕಾಡೆಮಿಯ ಕಚೇರಿ ಅಥವಾ ಅಂತರ್ಜಾಲದಿಂದ ಪಡೆಯಬಹುದಾಗಿರುತ್ತದೆ. ಮೊದಲು ಬಂದವರಿಗೆ ಮೊದಲ ಆದ್ಯತೆ. ಹೆಚ್ಚಿನ ವಿವರಗಳಿಗಾಗಿ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ, 3ನೇ ಮಹಡಿ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು – 560 001 ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. Website : www.gethnaa.com Miscellaneous Email Id:gethnaa1989@gmail.com ದೂರವಾಣಿ ಸಂಖ್ಯೆ 080 – 22210454, 9481535751., ಅನ್ನು ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಭಗವಾನ್ ಶ್ರೀ ಮಹಾವೀರ ಜಯಂತಿ ಹಾಗೂ "ಶ್ರೀ ಭಗವಾನ್ ಮಹಾವೀರ ಶಾಂತಿ" ಪ್ರಶಸ್ತಿ ಪ್ರದಾನ

ಬೆಂಗಳೂರು, ಏಪ್ರಿಲ್ 7 , (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಭಗವಾನ್ ಶ್ರೀ ಮಹಾವೀರ ಜಯಂತಿ ಹಾಗೂ "ಶ್ರೀ ಭಗವಾನ ಮಹಾವೀರ ಶಾಂತಿ" ಪ್ರಶಸ್ತಿ ಪ್ರದಾನ ಸಮಾರಂಭವನ್ನು ಏಪ್ರಿಲ್ 9 ರಂದು ಸಂಜೆ 5.30 ಗಂಟೆಗೆ ನಗರದ ಜೆ.ಸಿ.ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದೆ.

ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಶ್ರೀಮತಿ ಉಮಾಶ್ರೀ ಅವರು ಸಮಾರಂಭವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಶ್ರೀಮತಿ ಶಕುಂತಲಾ ಟಿ. ಶೆಟ್ಟಿ, ವಿಧಾನಸಭಾ ಸದಸ್ಯರು ಹಾಗೂ ಸಂಸದೀಯ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪಾಲ್ಗೊಳ್ಳಲಿದ್ದಾರೆ.

ಆರ್. ವಿ. ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ಅವರು ಅಧ್ಯಕ್ಷತೆಯನ್ನು ವಹಿಸಲಿರುವ ಈ ಸಮಾರಂಭದಲ್ಲಿ ಮಾಜಿ ಸಚಿವರು, ಶಾಸಕರು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿರುವರು.

ಎಸ್‌ಎಂ:ಜೆಡಿ:ಜಿಪಿಆರ್.

## ಹತ್ತು ತಿಂಗಳ ತೋಟಗಾರಿಕಾ ತರಬೇತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 6 , (ಕರ್ನಾಟಕ ವಾರ್ತೆ)

**2017-18** ನೇ ಸಾಲಿನಲ್ಲಿ **2017** ಮೇ **2** ರಿಂದ **2018** ಫೆಬ್ರವರಿ **28** ರವರೆಗೆ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ಇಲ್ಲಿ ನಡೆಯುವ **10** ತಿಂಗಳ ಅವಧಿಯ ತೋಟಗಾರಿಕೆ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿನ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.**

- ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ 1250/- ಗಳ ಮಾಸಿಕ ಶಿಷ್ಯ ವೇತನ ನೀಡಲಾಗುವುದು.
- ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿ ವಾಸವಾಗಿರುವವರು ಮಾತ್ರ ಅರ್ಜಿ ಹಾಕಲು ಅರ್ಹರಾಗಿರುತ್ತಾರೆ.
- ಕನ್ನಡ ವಿಷಯದೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು.
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ ಮತ್ತು ಇತರರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 30 ವರ್ಷ.
- ಈ ತರಬೇತಿಯು ರೈತರ ಮಕ್ಕಳಿಗಾಗಿ ಇರುವುದರಿಂದ ಅಭ್ಯರ್ಥಿಯ ತಂದೆ ಅಥವಾ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಉ ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಈ ಬಗ್ಗೆ ಪಹಣಿ ನೀಡುವುದು ಕಡ್ಡಾಯವಾಗಿರುತ್ತದೆ.
- ಅಭ್ಯರ್ಥಿಗಳು ತೋಟದ ಕೆಲಸಗಳನ್ನು ಮಾಡುವಷ್ಟು ಧೃಡಕಾಯರಾಗಿರಬೇಕು.
- ಅರ್ಜಿಗಳನ್ನು ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರು (ಜಿಪಂ) / ಹಿರಿಯ ಸಹಾಯ ತೋಟಗಾರಿಕೆ ನಿರ್ದೇಶಕರು (ರಾವ) / ಅಥವಾ ಇಲಾಖೆ ವೆಬ್‌ಸೈಟ್ www.horticulture.kar.nic.in ನಲ್ಲಿ ದಿನಾಂಕ: 12-04-2017 ರಿಂದ 24-04-2017 ಪಡೆಯಬಹುದಾಗಿರುತ್ತದೆ.
- ಸಾಮಾನ್ಯ ಅಭ್ಯರ್ಥಿಗಳಿಗೆ ರೂ 30 ಮತ್ತು ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ರೂ. 15/- ಗಳ ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ (ಐಪಿಓ) ಡಿಮ್ಯಾಂಡ್ ಡ್ರಾಫ್ಟ್ (ಡಿಡಿ) ನ್ನು ಆಯಾಯ ಜಿಲ್ಲೆಗಳ ತೋಟಗಾರಿಕೆ

ಉಪ ನಿರ್ದೇಶಕರು (ಜಿಪಂ) ರವರ ಹೆಸರಿನಲ್ಲಿ ಪಡೆದು, ಅರ್ಜಿ ಜೊತೆಗೆ ಲಗತ್ತಿಸಬೇಕು.

- ಅಭ್ಯರ್ಥಿಗಳನ್ನು ಸಂದರ್ಶನದ ಮುಖಾಂತರ ಆಯ್ಕೆ ಮಾಡಲಾಗುವುದು. ಸಂದರ್ಶನದ ದಿನಾಂಕ: 26–.04–.2017.
- ಭರ್ತಿಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ಏಪ್ರಿಲ್ 24 ಸಂಜೆ 5.30 ಗಂಟೆಯೊಳಗೆ ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಕೆಳಕಂಡ ದೂರವಾಣಿ ಸಂಖ್ಯೆಗಳಲ್ಲಿ ಸಂಪರ್ಕಿಸಬಹುದಾಗಿದೆ.

ತೋಟಗಾರಿಕೆ ಉಪ ನಿರ್ದೇಶಕರು, ಬೆಂಗಳೂರು ಗ್ರಾಮಾಂತರ – 080–22862206, ತೋಟಗಾರಿಕೆ ಉಪ ನಿರ್ದೇಶಕರು, ಬೆಂಗಳೂರು ನಗರ – 080 – 22860640, ತೋಟಗಾರಿಕೆ ಉಪ ನಿರ್ದೇಶಕರು, ರಾಮನಗರ – 080 – 27204327, ತೋಟಗಾರಿಕೆ ಉಪ ನಿರ್ದೇಶಕರು, ಕೋಲಾರ – 08152–226940, 226941, 222161, ತೋಟಗಾರಿಕೆ ಉಪ ನಿರ್ದೇಶಕರು, ಚಿಕ್ಕಬಳ್ಳಾಪುರ 08156–272027, 272217, ತೋಟಗಾರಿಕೆ ಉಪ ನಿರ್ದೇಶಕರು, ತುಮಕೂರು 0816–2275189, ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು – 080–26564538.

ಎಸ್‌ಎಂ:ಜೆಡಿ:ಜಿಪಿಆರ್.

## ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆ

**ಬೆಂಗಳೂರು, ಏಪ್ರಿಲ್ 7 , (ಕರ್ನಾಟಕ ವಾರ್ತೆ)**

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ಮೇ – 2017 ನೇ ಸಾಲಿನಲ್ಲಿ ನಡೆಯುವ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಸೀನಿಯರ್, ವಿದ್ವತ್ ಪೂರ್ವ, ವಿದ್ವತ್ ಅಂತಿಮ ವಿಭಾಗದ ಥಿಯರಿ ಪರೀಕ್ಷೆಗಳು ಮೇ 6 ಮತ್ತು 7 ರಂದು ನಡೆಯುತ್ತದೆ. ಜ್ಯೂನಿಯರ್ ವಿಭಾಗದ ಥಿಯರಿ ಪರೀಕ್ಷೆಗಳು ಮೇ 7 ರಂದು ನಡೆಯಲಿದೆ.

ಕರ್ನಾಟಕ ಸಂಗೀತ/ಕರ್ನಾಟಕ ತಾಳವಾದ್ಯ/ಹಿಂದೂಸ್ಥಾನಿ ಸಂಗೀತ/ಹಿಂದೂಸ್ಥಾನಿ ತಾಳವಾದ್ಯ/ಕಥಕ್/ಕೂಚುಪುಡಿ ಜ್ಯೂನಿಯರ್, ಸೀನಿಯರ್, ವಿದ್ವತ್ ಪೂರ್ವ, ವಿದ್ವತ್ ಅಂತಿಮ ಪ್ರಾಯೋಗಿಕ ಪರೀಕ್ಷೆಗಳು ಮೇ 2 ರಿಂದ ಪ್ರಾರಂಭಗೊಳ್ಳಲಿದೆ.

ಭರತನಾಟ್ಯ ಜ್ಯೂನಿಯರ್ ಪ್ರಾಯೋಗಿಕ ಪರೀಕ್ಷೆಗಳು ಎಲ್ಲಾ ವಿಭಾಗಗಳಲ್ಲಿ ಮೇ 2 ರಿಂದ ಏಕಕಾಲದಲ್ಲಿ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಪ್ರಾರಂಭವಾಗಲಿದೆ.

ಭರತನಾಟ್ಯ ಸೀನಿಯರ್, ವಿದ್ವತ್ ಪೂರ್ವ, ವಿದ್ವತ್ ಅಂತಿಮ ಪ್ರಾಯೋಗಿಕ ಪರೀಕ್ಷೆಗಳು ಬೆಂಗಳೂರು ಮತ್ತು ಕಲಬುರಗಿ ವಿಭಾಗಗಳಲ್ಲಿ ಮೇ 10 ರಿಂದ ಪ್ರಾರಂಭಗೊಳ್ಳಲಿವೆ.

ಭರತನಾಟ್ಯ ಸೀನಿಯರ್, ವಿದ್ವತ್ ಪೂರ್ವ, ವಿದ್ವತ್ ಅಂತಿಮ ಪ್ರಾಯೋಗಿಕ ಪರೀಕ್ಷೆಗಳು ಮೈಸೂರು ಮತ್ತು ಬೆಳಗಾವಿ ವಿಭಾಗಗಳಲ್ಲಿ ಮೇ 18 ರಿಂದ ಪ್ರಾರಂಭವಾಗಲಿವೆ.

ಪರೀಕ್ಷಾ ಶುಲ್ಕ ಪಾವತಿಸಿರುವ ಅಭ್ಯರ್ಥಿಗಳು, ತಮ್ಮ ಪ್ರವೇಶ ಪತ್ರಗಳನ್ನು ತಾವು ಅರ್ಜಿ ಸಲ್ಲಿಸಿದ್ದ ಪರೀಕ್ಷಾ ಕೇಂದ್ರಗಳಲ್ಲಿ ದಿನಾಂಕ: 05-04-2017 ರಿಂದ ಪಡೆಯಲು ತಿಳಿಸಿದೆ. ಪ್ರಾಯೋಗಿಕ ಪರೀಕ್ಷೆಯ ವೇಳಾಪಟ್ಟಿಯ ಬಗ್ಗೆ ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯಸ್ಥರನ್ನು ಸಂಪರ್ಕಿಸಲು ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 09-04-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು

ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಮಹಾಂತಪ್ಪ ಮತ್ತು ತಂಡ, ಹಾಸನ ರವರಿಂದ ರಂಗಗೀತೆಗಳ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

3) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ ಶ್ರೀಮತಿ. ಶ್ರೀರಂಜನಿ ಉಮೇಶ್ ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ಬಸವೇಶ್ವರನಗರ, ಬೆಂಗಳೂರು** ರವರ **ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

### II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಬೆಳಿಗ್ಗೆ 7.00 ಗಂಟೆಯಿಂದ 11.00 ಗಂಟೆಯವರೆಗೆ **ಬಿ.ಪ್ಯಾಕ್, ಬಿ.ಬಿ.ಎಂ.ಪಿ ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಯ ಸಹಯೋಗದೊಂದಿಗೆ ನೀರಿನ ಮಿತ ಬಳಕೆ ಹಾಗೂ ಅನುಸರಿಸುವ ವಿಧಾನ ಮತ್ತು ಮಳೆ ನೀರು ಕೊಯ್ಲು ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.**

## Action against illegal burning of waste and mis-management material

Bangalore, April 7 (Karnataka Information)

Instances of illegal burning of waste and mis-management of used oil/transmission oil has come to the knowledge of the Board. In this connection, the Board has identified few industries and they were called for personal hearing on 05.04.2017. Instructions were given to them during hearing to take action to disposed

off the waste as required under the Hazardous and Other Wastes (Management and Tran boundary Movement) Rules, 2016, The Plastic Waste Management Rules, 2016 and The Solid Waste Management Rules, 2016.

Of the industries called for hearing M/s. M.R. Industries, (Unit-I & II), No.14G, 2nd phase, Kumbalgodu Industrial Area, Bangalore South was found to be not properly managing the used oil and the Board apprehends that they are contributing for air pollution. Hence, it was decided to issue closure directions to the industry, till they comply with the provisions of the Hazardous and Other Wastes (Management and Tran boundary Movement) Rules, 2016, Water (Prevention & Control of Pollution) Act, 1974, Air (Prevention & Control of Pollution)Act, 1981. Board hereby directs all the industries to dispose the waste in accordance with law only.